# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
## ಪುಲಿಕೇಶಿನಗರ ಉಪ ವಿಭಾಗ, ವಾರ್ಡ್ ನಂ.61(ಎಸ್.ಕೆ ಗಾರ್ಡನ್)
## ವಾರ್ಡ್ ಸಮಿತಿ ಸಭೆ, ದಿನಾಂಕ: 21-10-2022 ರ ಸಭಾ ನಡವಳಿ

ಸಂಖ್ಯೆ:ಸ.ಕಾನಿ.ಅ (ಪು.ನ)/ಪಿಆರ್/ 11 / 22-23

ದಿನಾಂಕ: 21-10-2022 ರಂದು ಸಮಯ 11.00 ಗಂಟೆಗೆ ವಾರ್ಡ್ ನಂ. 61-ಎಸ್.ಕೆ ಗಾರ್ಡನ್ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಹಾಯಕ ಅಭಿಯಂತರರು ರವರ ವಾರ್ಡ್ ಕಛೇರಿ ಐ.ಟಿ.ಐ ಲೇಔಟ್ ಎಸ್.ಕೆ ಗಾರ್ಡನ್ ವಾರ್ಡ್ ಸಂಖ್ಯೆ 61 ರಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

| ಕ್ರ.ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | Atif Ahmed | Nodal Officer ward No. 61-S.K Garden & Asst. Executive Engineer, J.C. Nagar Sub-division |
| 2 | Rangappa B G | Asst. Engineer Ward No.61 |
| 3 | Venkatesh | Senior Health Inspector |
| 4 | Harish | JHI Ward No 61 |
| 5 | Srinivas | Senior Vetenary Inspector |
| 6 | Smt: M. Meena | Welfare Tailoring Teacher |
| 7 | Ragavendra N | Tax Inspector |
| 8 | Narasimhaiah | BWSSB |
| 9 | Manohar | JE Bescom |

ಶ್ರೀ ಅತೀಫ್ ಅಹಮ್ಮದ್, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಜೆ.ಸಿ ನಗರ ಉಪ ವಿಭಾಗ ಹಾಗೂ ವಾರ್ಡ್ ಕಮಿಟಿ ಅಧ್ಯಕ್ಷರು (ನೋಡಲ್ ಅಧಿಕಾರಿ) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿ/ ನೌಕರರು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

ದಿನಾಂಕ: 03-09-2022 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.

1. ವಾರ್ಡ್ ವ್ಯಾಪ್ತಿಯಲ್ಲಿರುವ ಅನಧೀಕೃತ ಬ್ಯಾನರ್. ಫ್ಲೆಕ್ಸ್ ಮತ್ತು ಬಂಟಿಂಗ್ಸ್‌ಗಳನ್ನು ತುರ್ತಾಗಿ ತೆರವುಗೊಳಸಲು ಸೂಚಿಸಲಾಯಿತು.
2. ಐ.ಟಿ.ಐ ಲೇಔಟ್‌ನಲ್ಲಿ ರಸ್ತೆಗಳು ಹಾಳಾಗಿರುವ ಬಗ್ಗೆ ಸಾರ್ವಜನಿಕರು ವಾರ್ಡ್ ಕಮಿಟಿ ಸಭೆಯಲ್ಲಿ ತಿಳಿಸಿರುತ್ತಾರೆ. ಸದರಿ ರಸ್ತೆಗಳನ್ನು ಸರಿಪಡಿಸಲು 2022-23 ನೇ ಸಾಲಿನ POW ಅನುದಾನದಡಿ ಕಾಮಗಾರಿ ನಿರ್ವಹಿಸಲು ಚರ್ಚಿಸಲಾಗಿರುತ್ತದೆ.
3. ಡಿ.ಜೆ.ಹಳ್ಳಿ ಮುಖ್ಯರಸ್ತೆಯಲ್ಲಿರುವ ಉರ್ದು ಶಾಲೆಯ ಮುಂಭಾಗದಲ್ಲಿರುವ ಪುಟ್‌ಪಾತ್‌ಅನ್ನು 2022-23 ನೇ ಸಾಲಿನ ಪಿ-3726 ರಡಿಯಲ್ಲಿ ಕಾಮಗಾರಿಯನ್ನು ನಿರ್ವಹಿಸಲು ಚರ್ಚಿಸಲಾಗಿರುತ್ತದೆ.
4. ಐ.ಟಿ.ಐ ಲೇಔಟ್‌ನ ರಸ್ತೆ ಬದಿಗಳಲ್ಲಿ ಬಿದ್ದಿರುವ ಡೆಬ್ರೀಸ್‌ನ್ನು ತೆರವುಗೊಳಸಲು ಸೂಚಿಸಲಾಯಿತು.
5. ಐ.ಟಿ.ಐ ಲೇಔಟ್‌ನ 7ನೇ ಮುಖ್ಯರಸ್ತೆಯಲ್ಲಿ ನೀರಿನ ಪೈಪ್‌ಲೈನ್ ಒಡೆದುಹೋಗಿದ್ದು, ತುರ್ತಾಗಿ ಸದರಿ ನೀರಿನ ಪೈಪ್‌ಲೈನ್ ಸರಿಪಡಿಸಲು ಸಂಬಂಧಪಟ್ಟ BWSSB ಅಧಿಕಾರಿಗಳಿಗೆ ಸೂಚಿಸಲಾಯಿತು.
6. ವಾರ್ಡ್ ವ್ಯಾಪ್ತಿಯಲ್ಲಿರುವ ಅನಧೀಕೃತ OFC ಕೇಬಲ್‌ಗಳನ್ನು ತೆರವುಗೊಳಸಲು ಸೂಚಿಸಲಾಯಿತು.
7. ವಾರ್ಡ್ ವ್ಯಾಪ್ತಿಯಲ್ಲಿದ್ದ ರಸ್ತೆ ಗುಂಡಿಗಳನ್ನು ಮುಚ್ಚಿರುವ ಬಗ್ಗೆ ಹಾಗೂ ಬಾಕಿ ಇರುವ ರಸ್ತೆ ಗುಂಡಿಗಳ ಮುಚ್ಚುವ ಬಗ್ಗೆ ಸಭೆಯಲ್ಲಿ ಮತ್ತೊಮ್ಮೆ ಚರ್ಚಿಸಲಾಗಿರುತ್ತದೆ.

Scanned with CamScanner

8. ಮಧೀನಾ ಮೊಹಲ್ಲಾ ಕ್ವಾಟ್ರಸ್‌ನ ಅಡ್ಡರಸ್ತೆ ಮತ್ತು ಸುತ್ತಮುತ್ತಲ್ಲಿನ ರಸ್ತೆಗಳಲ್ಲಿ ನೀರು ಸರಬರಾಜು ಸರಿಯಾಗಿ ಕಾರ್ಯನಿರ್ವಹಿಸದೇ ಇರುವ ಬಗ್ಗೆ ಸಂಬಂಧಪಟ್ಟ BWSSB ಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಲಾಗಿರುತ್ತದೆ.

ಮೇಲ್ಕಂಡ ಸಮಸ್ಯೆಗಳು ಬಗ್ಗೆ ಸುದೀರ್ಘವಾಗಿ ಚರ್ಚಿಸಿ, ನೋಡಲ್ ಅಧಿಕಾರಿ ರವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಅತೀಖ್ ಅಹಮ್ಮದ್)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 61

ಪ್ರತಿಯನ್ನು:

01. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
02. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
03. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
04. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
05. ಕಂದಾಯ ಅಧಿಕಾರಿ (ಮಲಕೇಶಿನಗರ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
06. ಸಹಾಯಕ ಕಾರ್ಯಪಾಲಕ ಅಭಿಯಂತರರು(ಮಲಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
07. ಸಹಾಯಕ ಕಾರ್ಯಪಾಲಕ ಅಭಿಯಂತರರು (ಮಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
08. ಸಹಾಯಕ ಅಭಿಯಂತರರು(ವಿದ್ಯುತ್/ಮಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
09. ಕಛೇರಿ ಕಡತಕ್ಕೆ.

Scanned with CamScanner